Akashvani : Bengaluru
National Bulletin In Kannada
14.10.2025 : 1310hrs
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

## ಮುಖ್ಯಾಂಶಗಳು

೧. ಭಾರತ–ಮಂಗೋಲಿಯಾ ನಡುವೆ ನಿಯೋಗ ಮಟ್ಟದ ಮಾತುಕತೆ ಪ್ರಗತಿಯಲ್ಲಿ; ಉಭಯ ರಾಷ್ಟ್ರಗಳ ದ್ವಿಪಕ್ಷೀಯ ಸಂಬಂಧಗಳ ಪ್ರಗತಿ ಪರಿಶೀಲನೆ

೨. ರಾಜಕೀಯ ಜಾಹಿರಾತು ಬಿಡುಗಡೆಗೂ ಮುನ್ನ ಪೂರ್ವ–ಪ್ರಮಾಣೀಕರಣ ಪಡೆಯುವಂತೆ ರಾಜಕೀಯ ಪಕ್ಷಗಳಿಗೆ ಚುನಾವಣಾ ಆಯೋಗ ನಿರ್ದೇಶನ

೩. ವಿಶ್ವಸಂಸ್ಥೆ ರಕ್ಷಣಾ ತುಕಡಿ ಸಹಾಯಕ ರಾಷ್ಟ್ರಗಳ ಮುಖ್ಯಸ್ಥರ ಸಮಾವೇಶ – ಯುಎನ್‌ಟಿಸಿಸಿ ನವದೆಹಲಿಯಲ್ಲಿಂದು ಆರಂಭ

೪. ಟೆಸ್ಟ್ ಕ್ರಿಕೆಟ್: ವೆಸ್ಟ್ ಇಂಡೀಸ್ ವಿರುದ್ಧ ಸರಣಿ ವಶಪಡಿಸಿಕೊಂಡ ಭಾರತ

***************

ಭಾರತ ಮತ್ತು ಮಂಗೋಲಿಯಾ ನಡುವೆ ನಿಯೋಗ ಮಟ್ಟದ ಮಾತುಕತೆ ನವದೆಹಲಿಯಲ್ಲಿ ಪ್ರಗತಿಯಲ್ಲಿದೆ. ಪ್ರಧಾನಿ ನರೇಂದ್ರ ಮೋದಿ ಮತ್ತು ಮಂಗೋಲಿಯಾ ಅಧ್ಯಕ್ಷ ಖುರೇಲ್‌ಸುಖ್ ಉಖ್ನಾ ಸಭೆಯಲ್ಲಿ ಭಾಗವಹಿಸಿದ್ದಾರೆ. ಸಭೆಯಲ್ಲಿ, ಎರಡೂ ಕಡೆಯವರು ದ್ವಿಪಕ್ಷೀಯ ಸಂಬಂಧಗಳ ಸಂಪೂರ್ಣ ವ್ಯಾಪ್ತಿಯನ್ನು ಪರಿಶೀಲಿಸಲಿದ್ದಾರೆ. ಮಾತುಕತೆಯ ನಂತರ ಹಲವಾರು ಒಪ್ಪಂದಗಳಿಗೆ ಸಹಿ ಹಾಕುವ ನಿರೀಕ್ಷೆಯಿದೆ. ಇದಕ್ಕೂ ಮುನ್ನ, ಮಂಗೋಲಿಯಾ ಅಧ್ಯಕ್ಷರು ರಾಜ್‌ಘಾಟ್‌ಗೆ ಭೇಟಿ ನೀಡಿ ಮಹಾತ್ಮ ಗಾಂಧಿ ಅವರ ಸಮಾಧಿಗೆ ಗೌರವ ನಮನ ಸಲ್ಲಿಸಿದರು. ಮಂಗೋಲಿಯಾ ಅಧ್ಯಕ್ಷರು ಇಂದು ಸಂಜೆ ರಾಷ್ಟ್ರಪತಿ ಭವನದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿ ಮಾಡಲಿದ್ದಾರೆ. ಇದೇ ವೇಳೆ ಮಂಗೋಲಿಯಾ ಅಧ್ಯಕ್ಷರಿಗಾಗಿ ರಾಷ್ಟ್ರಪತಿಯವರು ಔತಣಕೂಟವನ್ನು ಆಯೋಜಿಸಲಿದ್ದಾರೆ. ಮಂಗೋಲಿಯಾದ ಅಧ್ಯಕ್ಷ ಖುರೇಲ್‌ಸುಖ್ ಉಖ್ನಾ ಅವರು ನಾಲ್ಕು ದಿನಗಳ ಭಾರತ ಭೇಟಿಗಾಗಿ ನಿನ್ನೆ ನವದೆಹಲಿಗೆ ಆಗಮಿಸಿದರು. ಮಂಗೋಲಿಯಾದ ಅಧ್ಯಕ್ಷರೊಂದಿಗೆ ಸಂಪುಟ ಸಚಿವರು, ಸಂಸತ್ ಸದಸ್ಯರು, ಹಿರಿಯ ಅಧಿಕಾರಿಗಳು, ಉದ್ಯಮಿಗಳು ಮತ್ತು ಸಾಂಸ್ಕೃತಿಕ ಪ್ರತಿನಿಧಿಗಳನ್ನು ಒಳಗೊಂಡ ಉನ್ನತ ಮಟ್ಟದ ನಿಯೋಗವಿದೆ. ಮಂಗೋಲಿಯಾ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡ ನಂತರ ಖುರೇಲ್‌ಸುಖ್ ಅವರ ಮೊದಲ ಭಾರತ ಭೇಟಿ ಇದಾಗಿದೆ.

***************

ಎಲ್ಲಾ ರಾಜಕೀಯ ಪಕ್ಷಗಳು ಮತ್ತು ಅಭ್ಯರ್ಥಿಗಳು, ಸಾಮಾಜಿಕ ಮಾಧ್ಯಮ ವೇದಿಕೆಗಳು ಸೇರಿದಂತೆ ಮಾಧ್ಯಮಗಳಲ್ಲಿ ಯಾವುದೇ ರಾಜಕೀಯ ಜಾಹೀರಾತುಗಳನ್ನು ಬಿಡುಗಡೆ ಮಾಡುವ ಮೊದಲು ಮಾಧ್ಯಮ ಪ್ರಮಾಣೀಕರಣ ಮತ್ತು ಮೇಲ್ವಿಚಾರಣಾ ಸಮಿತಿಯಿಂದ ಪೂರ್ವ–ಪ್ರಮಾಣೀಕರಣವನ್ನು ಪಡೆಯಬೇಕು ಎಂದು ಭಾರತೀಯ ಚುನಾವಣಾ ಆಯೋಗ ನಿರ್ದೇಶಿಸಿದೆ. ರಾಜಕೀಯ ಜಾಹೀರಾತುಗಳ ಪೂರ್ವ–ಪ್ರಮಾಣೀಕರಣಕ್ಕಾಗಿ ಜಿಲ್ಲಾ ಮತ್ತು ರಾಜ್ಯ ಮಟ್ಟದಲ್ಲಿ ಸಮಿತಿಗಳನ್ನು ರಚಿಸಲಾಗಿದೆ ಎಂದು ಆಯೋಗ ತಿಳಿಸಿದೆ. ಅಭ್ಯರ್ಥಿಗಳು ನಾಮಪತ್ರ ಸಲ್ಲಿಸುವ ಸಮಯದಲ್ಲಿ ತಮ್ಮ ಅಧಿಕೃತ ಸಾಮಾಜಿಕ ಮಾಧ್ಯಮ ಖಾತೆಗಳ ವಿವರಗಳನ್ನು ಹಂಚಿಕೊಳ್ಳಲು ಆಯೋಗ ಸೂಚಿಸಿದೆ. ವಿಧಾನಸಭಾ ಚುನಾವಣೆಗಳು ಮುಗಿದ ೭೫ ದಿನಗಳ ಒಳಗೆ ರಾಜಕೀಯ ಪಕ್ಷಗಳು ಸಾಮಾಜಿಕ ಮಾಧ್ಯಮ ಜಾಲಾಣಗಳು ಸೇರಿದಂತೆ ಅಂತರ್ಜಾಲದ ಮೂಲಕ ಪ್ರಚಾರಕ್ಕಾಗಿ ಮಾಡಿದ ವೆಚ್ಚದ ವರದಿಯನ್ನು ಸಲ್ಲಿಸಬೇಕು ಎಂದು ಆಯೋಗ ತಿಳಿಸಿದೆ.

***************

ವಿಶ್ವಸಂಸ್ಥೆ ರಕ್ಷಣಾ ತುಕಡಿ ಸಹಾಯಕ ರಾಷ್ಟ್ರಗಳ ಮುಖ್ಯಸ್ಥರ ಸಮಾವೇಶ– ಯುಎನ್‌ಟಿಸಿಸಿ ನವದೆಹಲಿಯಲ್ಲಿ ಇಂದು ಪ್ರಾರಂಭವಾಯಿತು. ಕಾರ್ಯಾಚರಣೆಯ ಸವಾಲುಗಳು, ವಿಕಸನಗೊಳ್ಳುತ್ತಿರುವ ಬೆದರಿಕೆಗಳು, ಉತ್ತಮ ಅಭ್ಯಾಸಗಳನ್ನು ಹಂಚಿಕೊಳ್ಳುವುದು ಮತ್ತು ಭವಿಷ್ಯದ ಶಾಂತಿಪಾಲನೆಯ ಕುರಿತು ಹಂಚಿಕೆಯ ತಿಳುವಳಿಕೆಯನ್ನು ನಿರ್ಮಿಸುವ ಕುರಿತು ಚರ್ಚಿಸಲು ಭಾರತೀಯ ಸೇನೆಯು ಮೂರು ದಿನಗಳ ಉನ್ನತ ಮಟ್ಟದ ವೇದಿಕೆಯನ್ನು ಆಯೋಜಿಸಿದೆ. ಸಭೆಯಲ್ಲಿ ಮಾತನಾಡಿದ ರಕ್ಷಣಾ ಸಚಿವ ರಾಜನಾಥ್ ಸಿಂಗ್, ಕೆಲವು ರಾಷ್ಟ್ರಗಳು ಅಂತರರಾಷ್ಟ್ರೀಯ ನಿಯಮಗಳನ್ನು ಬಹಿರಂಗವಾಗಿ ಉಲ್ಲಂಘಿಸುತ್ತಿದ್ದರೆ, ಕೆಲವು ರಾಷ್ಟ್ರಗಳು ಪ್ರಾಬಲ್ಯ ಸಾಧಿಸಲು ಬಯಸುತ್ತಿರುವುದರಿಂದ, ಈಗಿರುವ ಅಂತರರಾಷ್ಟ್ರೀಯ ವ್ಯವಸ್ಥೆಯಲ್ಲಿ ಸುಧಾರಣೆ ತರಬೇಕೆಂದು ಭಾರತ ಪ್ರತಿಪಾದಿಸುತ್ತಿದೆ ಎಂದು ಸಚಿವರು ಹೇಳಿದರು. ಅಂತಾರಾಷ್ಟ್ರೀಯ ನಿಯಮ ಆಧಾರಿತ ಕ್ರಮವನ್ನು ಎತ್ತಿಹಿಡಿಯುವಲ್ಲಿ ದೇಶ ಬಲವಾಗಿ ನಿಂತಿದೆ, ಶಾಂತಿಪಾಲನೆಯ ಯಶಸ್ಸು ಸಂಖ್ಯೆಗಳ ಮೇಲೆ ಮಾತ್ರವಲ್ಲದೆ ಸನ್ನದ್ಧತೆಯ ಮೇಲೆ ಅವಲಂಬಿತವಾಗಿದೆ ಎಂದು ಭಾರತ ಪ್ರತಿಪಾದಿಸುತ್ತದೆ ಎಂದು ಸಚಿವರು ಹೇಳಿದರು.

ಶಾಂತಿಪಾಲನಾ ಕಾರ್ಯಾಚರಣೆಗಳ ಸುಸ್ಥಿರತೆಗಾಗಿ, ಎಲ್ಲಾ ಸದಸ್ಯ ರಾಷ್ಟ್ರಗಳು ಪಡೆಗಳು, ಲಾಜಿಸ್ಟಿಕ್ಸ್, ತಂತ್ರಜ್ಞಾನಗಳು ಅಥವಾ ವಿಶೇಷ ಸಾಮರ್ಥ್ಯಗಳೊಂದಿಗೆ ತಮ್ಮ ಬೆಂಬಲವನ್ನು ಹೆಚ್ಚಿಸಬೇಕೆಂದು ಸಚಿವರು ಒತ್ತಾಯಿಸಿದರು. ಸುರಕ್ಷಿತ

ಸಂವಹನ, ಕಣ್ಗಾವಲು ವ್ಯವಸ್ಥೆಗಳು ಮತ್ತು ಮಾನವರಹಿತ ವೇದಿಕೆಗಳಂತಹ ನಾವೀನ್ಯತೆಗಳ ಕಾರ್ಯಾಚರಣೆಗಳನ್ನು ಸುರಕ್ಷಿತ ಮತ್ತು ಹೆಚ್ಚು ಪರಿಣಾಮಕಾರಿಯಾಗಿ ಮಾಡಬಹುದು ಎಂದು ಅವರು ಹೇಳಿದರು. ಆತ್ಮನಿರ್ಭರ ಭಾರತ್ ಅಡಿಯಲ್ಲಿ, ದೇಶವು ಶಾಂತಿಪಾಲನಾ ಕಾರ್ಯಾಚರಣೆಗಳನ್ನು ಬಲಪಡಿಸುವ ವೆಚ್ಚ-ಪರಿಣಾಮಕಾರಿ ಸ್ಥಳೀಯ ತಂತ್ರಜ್ಞಾನಗಳನ್ನು ಅಭಿವೃದ್ಧಿಪಡಿಸಿದೆ ಎಂದು ಸಚಿವರು ಒತ್ತಿ ಹೇಳಿದರು. ವಿಶ್ವಸಂಸ್ಥೆಯ ಶಾಂತಿಪಾಲನಾ ಕಾರ್ಯಾಚರಣೆಗಳಿಗೆ ಸೈನ್ಯವನ್ನು ನೀಡುವ ೩೨ ದೇಶಗಳ ಮುಖ್ಯಸ್ಥರು ಮತ್ತು ಪ್ರತಿನಿಧಿಗಳು ಈ ಸಮಾವೇಶದಲ್ಲಿ ಭಾಗವಹಿಸುತ್ತಿದ್ದಾರೆ.

***************

ರಾಷ್ಟ್ರೀಯ ಮಹಿಳಾ ಆಯೋಗ ನೈರುತ್ಯ ರೈಲ್ವೆಯ ಬೆಂಗಳೂರು ವಿಭಾಗದ ರೈಲ್ವೆ ರಕ್ಷಣಾ ದಳ ಮತ್ತು ದ ವತಿಯಿಂದ ಬೆಂಗಳೂರಿನಲ್ಲಿಂದು ಮಾನವ ಕಳ್ಳಸಾಗಣೆ ವಿರೋಧಿ ಕಾರ್ಯಾಗಾರ ಹಮ್ಮಿಕೊಳ್ಳಲಾಗಿತ್ತು. ಈ ಸಂದರ್ಭದಲ್ಲಿ ಮಾತನಾಡಿದ ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ, ವಿಕಸಿತ ಭಾರತದ ಕನಸುಗಾರರಾದ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ನೇತೃತ್ವದ ಕೇಂದ್ರ ಸರ್ಕಾರ ಮಹಿಳೆಯರ ಸುರಕ್ಷತೆಗೆ ಹೆಚ್ಚಿನ ಆದ್ಯತೆ ನೀಡುತ್ತಿದೆ ಎಂದು ಹೇಳಿದರು. ಮಾನವ ಕಳ್ಳಸಾಗಣೆ ಹಾಗೂ ಮಹಿಳೆಯರ ಮೇಲಿನ ದೌರ್ಜನ್ಯ ತಡೆಗಟ್ಟುವ ಉದ್ದೇಶದಿಂದ ರಾಷ್ಟ್ರೀಯ ಮಹಿಳಾ ಆಯೋಗದ ಸಹಯೋಗದಲ್ಲಿ ರೈಲ್ವೆ ರಕ್ಷಣಾ ದಳ ಅವಿರತವಾಗಿ ಶ್ರಮಿಸುತ್ತಿದೆ ಎಂದರು. ರಾಷ್ಟ್ರೀಯ ಮಹಿಳಾ ಆಯೋಗದ ಅಧ್ಯಕ್ಷೆ ವಿಜಯಾ.ಕೆ ರಹತ್ಕರ್ ಮಾತನಾಡಿ, ಮಾನವ ಕಳ್ಳಸಾಗಣೆ ಕೇವಲ ಅಪರಾಧವಲ್ಲ. ಅದು ಮಾನವೀಯತೆಯ ಮೇಲಿನ ದಾಳಿಯಾಗಿದೆ. ಮಾನವ ಕಳ್ಳಸಾಗಣೆ- ಮಕ್ಕಳು ಮತ್ತು ಮಹಿಳೆಯರ ಜೀವನವನ್ನು ನರಕಸದೃಶ್ಯಗೊಳಿಸುತ್ತದೆ. ರೈಲುಗಳಲ್ಲಿ ಏಕಾಂಗಿಯಾಗಿ ಪ್ರಯಾಣಿಸುವ ಮಹಿಳೆಯರ ಹೆಚ್ಚಿನ ಸುರಕ್ಷತೆಗಾಗಿ ರೈಲ್ವೆ ರಕ್ಷಣಾ ದಳವು ಸಿಬ್ಬಂದಿಯನ್ನು ನಿಯೋಜಿಸುತ್ತಿದೆ ಎಂದು ಹೇಳಿದರು.

***************

ಕೋಲ್ಡ್ರಿಫ್ ಕೆಮ್ಮಿನ ಸಿರಪ್ ಸೇರಿದಂತೆ ಭಾರತದಲ್ಲಿ ತಯಾರಾಗುವ ಮೂರು ಕಲಬೆರಕೆ ಸಿರಪ್‌ಗಳನ್ನು ವಿಶ್ವ ಆರೋಗ್ಯ ಸಂಸ್ಥೆ ಗುರುತಿಸಿದೆ ಮತ್ತು ಈ ಉತ್ಪನ್ನಗಳಲ್ಲಿ ಯಾವುದಾದರೂ ಇತರ ದೇಶಗಳಲ್ಲಿ ಪತ್ತೆಯಾದರೆ ಸಂಸ್ಥೆಗೆ ವರದಿ ಮಾಡುವಂತೆ ಆಗ್ರಹಿಸಿದೆ. ಕೆಮ್ಮಿನ ಸಿರಪ್ ಸೇವನೆಯಿಂದ ಮಧ್ಯಪ್ರದೇಶದಲ್ಲಿ ಹಲವು ಮಕ್ಕಳ ಸಾವು ಸಂಭವಿಸಿದ ನಂತರ ನಡೆದ ಪ್ರಮುಖ ಬೆಳವಣಿಗೆ ಇದಾಗಿದೆ. ಎರಡು ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳಿಗೆ ಅಂತಹ ಔಷಧಿಗಳನ್ನು ಶಿಫಾರಸು ಮಾಡಬಾರದು ಅಥವಾ ವಿತರಿಸಬಾರದು ಮತ್ತು ಸಾಮಾನ್ಯವಾಗಿ ಐದು ವರ್ಷದೊಳಗಿನವರಿಗೆ ಶಿಫಾರಸು ಮಾಡುವುದಿಲ್ಲ ಎಂದು ಸಂಸ್ಥೆ ತಿಳಿಸಿದೆ.

***************

ದೆಹಲಿಯ ಅರುಣ್ ಜೇಟ್ಲಿ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಡೆದ ವೆಸ್ಟ್ ಇಂಡೀಸ್ ತಂಡದ ವಿರುದ್ಧದ ಟೆಸ್ಟ್ ಕ್ರಿಕೆಟ್ ಪಂದ್ಯದಲ್ಲಿ ಭಾರತ ೭ ವಿಕೆಟ್‌ಗಳಿಂದ ಗೆಲುವು ದಾಖಲಿಸಿದ್ದು, ಸರಣಿಯನ್ನು ೨-೦ ಅಂತರದಲ್ಲಿ ವಶಪಡಿಸಿಕೊಂಡಿದೆ. ಐದನೇ ಹಾಗೂ ಅಂತಿಮ ದಿನದಾಟದಲ್ಲಿಂದು ೧೨೧ ರನ್‌ಗಳ ಗುರಿ ಬೆನ್ನಟ್ಟುವುದನ್ನು ಮುಂದುವರೆಸಿದ ಭಾರತ, ೩ ವಿಕೆಟ್ ನಷ್ಟಕ್ಕೆ ೧೨೪ ರನ್ ಗಳಿಸಿ ಸರಣಿಯನ್ನು ತನ್ನದಾಗಿಸಿಕೊಂಡಿತು. ಮೊದಲ ಇನ್ನಿಂಗ್ಸ್‌ನಲ್ಲಿ ಭಾರತ, ೫ ವಿಕೆಟ್ ನಷ್ಟಕ್ಕೆ ೫೧೮ ರನ್ ಮಾಡಿ, ಡಿಕ್ಲೇರ್ ಮಾಡಿಕೊಂಡಿತ್ತು. ವೆಸ್ಟ್ ಇಂಡೀಸ್ ತನ್ನ ಮೊದಲ ಇನ್ನಿಂಗ್ಸ್‌ನಲ್ಲಿ ೨೪೮ ರನ್, ನಂತರ ಫಾಲೋಆನ್ ಎದುರಿಸಿ, ಎರಡನೇ ಇನ್ನಿಂಗ್ಸ್‌ನಲ್ಲಿ ೩೯೦ ರನ್ ಗಳಿಸಿತು.

***************

ಕೊಲಂಬೊದ ಆರ್. ಪ್ರೇಮದಾಸ ಕ್ರೀಡಾಂಗಣದಲ್ಲಿಂದು ನಡೆಯುವ ಐಸಿಸಿ ಮಹಿಳಾ ಏಕದಿನ ವಿಶ್ವಕಪ್ ಕ್ರಿಕೆಟ್ ಪಂದ್ಯದಲ್ಲಿ, ಶ್ರೀಲಂಕಾ ತಂಡ, ನ್ಯೂಜಿಲೆಂಡ್ ವಿರುದ್ಧ ಸೆಣಸಲಿದೆ. ಪಂದ್ಯ ಭಾರತೀಯ ಕಾಲಮಾನ ಮಧ್ಯಾಹ್ನ ೩ ಗಂಟೆಗೆ ಆರಂಭವಾಗಲಿದೆ. ವಿಶಾಖಪಟ್ಟಣದಲ್ಲಿ ನಿನ್ನೆ ರಾತ್ರಿ ನಡೆದ ಪಂದ್ಯದಲ್ಲಿ ದಕ್ಷಿಣ ಆಫ್ರಿಕಾ ತಂಡ, ಬಾಂಗ್ಲಾದೇಶವನ್ನು ೩ ವಿಕೆಟ್‌ಗಳಿಂದ ಸೋಲಿಸಿತು.

***************